# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೋವಿಡ್-19 RT-PCR ಪರೀಕ್ಷೆಗಾಗಿ ಖಾಸಗಿ ಪ್ರಯೋಗಾಲಯಗಳಿಗೆ ಸರ್ಕಾರದಿಂದ ಕಳುಹಿಸಲಾದ ಮಾದರಿಗಳ ಪರೀಕ್ಷಾ ಫಲಿತಾಂಶದ ವೆಚ್ಚವನ್ನು ಸಮಯಾಧಾರಿತವಾಗಿ ಪಾವತಿಸುವ ಕುರಿತು

ಓದಲಾಗಿದೆ: ಆಯುಕ್ತಾಲಯದ ಏಕಕಡತ ಸಂಖ್ಯೆ: NHM/FMG/CFO/44/2020-21 ದಿನಾಂಕ:19-08-2020.

ಪ್ರಸ್ತಾವನೆ:

ಮೇಲೆ ಓದಲಾದ ಏಕ ಕಡತದಲ್ಲಿ ಕೋವಿಡ್-19 ಸೋಂಕನ್ನು ಪತ್ತೆಹಚ್ಚಲು RT-PCR ಪರೀಕ್ಷೆಗಾಗಿ ಸರ್ಕಾರದಿಂದ ಖಾಸಗಿ ಪ್ರಯೋಗಾಲಯಗಳಿಗೆ ಕಳುಹಿಸಲಾದ ಮಾದರಿಗಳ ಪರೀಕ್ಷೆಗಳನ್ನು ಪರಿಣಾಮಕಾರಿಯಾಗಿ, ವಿಳಂಬವಾಗದಂತೆ ನಡೆಸುವ ಸದುದ್ದೇಶದಿಂದ ಪರೀಕ್ಷಾ ವೆಚ್ಚವನ್ನು ಸಮಯಾಧಾರಿತವಾಗಿ ನಿಗದಿ ಪಡಿಸಲು ಹಾಗೂ ಸರ್ಕಾರಿ ಪ್ರಯೋಗಾಲಯಗಳಲ್ಲಿ ಸತತವಾಗಿ ಒಂದು ವಾರದ ಸಮಯದಲ್ಲಿ ಶೇ.25 ಕ್ಕಿಂತ ಹೆಚ್ಚಿನ ಮಾದರಿಗಳ ಪರೀಕ್ಷೆಗಳ ಫಲಿತಾಂಶದಲ್ಲಿ ವಿಳಂಬವಾಗಿದ್ದಲ್ಲಿ, ಅಂತಹ ಪ್ರಯೋಗಾಲಯಗಳ ಸಿಬ್ಬಂದಿಗಳ ಮೇಲೆ ಶಿಸ್ತು ಕ್ರಮ ಜರುಗಿಸಲು ಪ್ರಸ್ತಾಪಿಸಿರುತ್ತಾರೆ.

ವಿಷಯವನ್ನು ದಿನಾಂಕ:25-08-2020 ರಂದು ನಡೆದ ತಾಂತ್ರಿಕ ಸಲಹಾ ಸಮಿತಿಯ ಮುಂದೆ ಮಂಡಿಸಲಾಗಿ, ಕೋವಿಡ್-19 ಸಾಂಕ್ರಾಮಿಕದ ಪ್ರಸ್ತುತ ಪರಿಸ್ಥಿತಿಯಲ್ಲಿ ಪ್ರಯೋಗಾಲಯಗಳಲ್ಲಿ ಸಿಬ್ಬಂದಿಗಳು ಒತ್ತಡದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಇಂತಹ ಸಮಯದಲ್ಲಿ ಪ್ರಸ್ತಾಪಿತ ಯೋಜನೆಯು ನಿರುತ್ಸಾಹದಾಯಕ ಹಾಗೂ ಪ್ರತಿರೋಧ ಪರಿಣಾಮವನ್ನು ಉಂಟು ಮಾಡುವುದಾಗಿ ತಿಳಿಸಿ, ದಂಡ ವಿಧಿಸುವ ಬದಲಿಗೆ ನಿಗದಿತ ಸಮಯದೊಳಗೆ (24 ಗಂಟೆಯೊಳಗೆ) ಫಲಿತಾಂಶ ನೀಡುವ ಪ್ರಯೋಗಾಲಯಗಳಿಗೆ ಪ್ರತಿ ಪರೀಕ್ಷೆಗೆ ಶೇ. 10 ರಷ್ಟು ಪ್ರೋತ್ಸಾಹ ಧನವನ್ನು ನೀಡಲು ಶಿಫಾರಸ್ಸು ಮಾಡಿರುತ್ತದೆ.

ಪ್ರಸ್ತಾವನೆಯ ಅಂಶಗಳನ್ನು ಸಲಹಾ ಸಮಿತಿಯ ಶಿಫಾರಸ್ಸಿನ ಅನ್ವಯ ಸಮಗ್ರವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 312 ಸಿಜಿಎಂ 2020,**
**ಬೆಂಗಳೂರು, ದಿನಾಂಕ: 03.09.2020**

ಖಾಸಗಿ ಪ್ರಯೋಗಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಪ್ರೋತ್ಸಾಹಿಸುವ ಹಾಗೂ ಪರೀಕ್ಷೆಯ ಫಲಿತಾಂಶ ವಿಳಂಬವಾಗದಂತೆ ಎಚ್ಚರವಹಿಸುವ ನಿಟ್ಟಿನಲ್ಲಿ ಕೋವಿಡ್-19 RT-PCR ಪರೀಕ್ಷೆಗಾಗಿ ಖಾಸಗಿ ಪ್ರಯೋಗಾಲಯಗಳಿಗೆ ಸರ್ಕಾರದಿಂದ ಕಳುಹಿಸಲಾದ ಮಾದರಿಗಳ ಪರೀಕ್ಷಾ ಫಲಿತಾಂಶದ ಧನವನ್ನು, ಈ ಕೆಳಕಂಡಂತೆ ಪರಿಷ್ಕರಿಸಿ ಆದೇಶಿಸಿದೆ.

- 24 ಗಂಟೆಗಳ ಒಳಗೆ ಪರೀಕ್ಷಾ ಫಲಿತಾಂಶವನ್ನು ನೀಡುವ ಮತ್ತು ಅದೇ ಸಮಯದೊಳಗೆ ICMR ವೆಬ್ ಪೋರ್ಟಲ್‌ನಲ್ಲಿ ನಮೂದಿಸುವ ಖಾಸಗಿ ಪ್ರಯೋಗಾಲಯಗಳಿಗೆ ಪ್ರತಿ ಪರೀಕ್ಷೆಗೆ ಶೇ.10% ರಷ್ಟು ಪ್ರೋತ್ಸಾಹ ಧನ ನೀಡತಕ್ಕದ್ದು.
- 24 ರಿಂದ 48 ಗಂಟೆಗಳ ಒಳಗೆ ಪರೀಕ್ಷಾ ಫಲಿತಾಂಶವನ್ನು ಒದಗಿಸುವ ಮತ್ತು ಅದೇ ಸಮಯದೊಳಗೆ ICMR ವೆಬ್ ಪೋರ್ಟಲ್‌ನಲ್ಲಿ ನಮೂದಿಸುವ ಖಾಸಗಿ ಪ್ರಯೋಗಾಲಯಗಳಿಗೆ ಪ್ರತಿ ಪರೀಕ್ಷೆಗೆ ಈಗಾಗಲೇ ನಿಗದಿಪಡಿಸಿರುವ ದರದನ್ವಯ ಪಾವತಿಸತಕ್ಕದ್ದು.

ಪರೀಕ್ಷಾ ಫಲಿತಾಂಶಗಳನ್ನು 48 ಗಂಟೆಗಳಿಗಿಂತ ವಿಳಂಬವಾಗಿ ನೀಡುವ ಮತ್ತು ವಿಳಂಬಹಾಗಿ ICMR ವೆಬ್ ಪೋರ್ಟಲ್‌ನಲ್ಲಿ ನಮೂದಿಸುವ ಖಾಸಗಿ ಪ್ರಯೋಗಾಲಯಗಳಿಗೆ ಪ್ರತಿ ಪರೀಕ್ಷೆಗೆ ಶೇ.10 ರಷ್ಟು ದಂಡವನ್ನು ವಿಧಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಪದ್ಮ.ವಿ) 03/7/2020
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
ಆರೋಗ್ಯ 1&2

ಇವರಿಗೆ,

1. ಪ್ರಧಾನ ಮಹಾಲೇಖಪಾಲರು(ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್‌ಎ).ಹೊಸ ಕಟ್ಟಡ,ಆಡಿಟ್ ಭವನ,ಅಂಚೆ ಪೆಟ್ಟಿಗೆ-5398,ಬೆಂಗಳೂರು-01
2. ಪ್ರಧಾನ ಮಹಾಲೇಖಪಾಲರು(ಎ&ಇ),ಪಾರ್ಕ್‌ಹೌಸ್ ರಸ್ತೆ,ಅಂಚೆಪೆಟ್ಟಿಗೆ-5329,ಬೆಂಗಳೂರು-
3. ಆಯುಕ್ತರು,ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು,ಆನಂದರಾವ್ ವೃತ್ತ, ಬೆಂಗಳೂರು.
4. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಆನಂದರಾವ್ ವೃತ್ತ, ಬೆಂಗಳೂರು.
5. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು.
6. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ.
7. ಎಲ್ಲಾ ವೈದ್ಯಕೀಯ ಸಂಸ್ಥೆಗಳ ನಿರ್ದೇಶಕರುಗಳಿಗೆ.
8. ಎಲ್ಲಾ ಜಿಲ್ಲೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ.

ಪ್ರತಿ ಮಾಹಿತಿಗಾಗಿ:-
1) ಆಕುಕ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ,ಬೆಂಗಳೂರು.
2) ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
4)ಜಂಟಿ ಕಾರ್ಯದರ್ಶಿ/ಉಪಕಾರ್ಯದರ್ಶಿ ಯವರ ಆಪ್ತ ಸಹಾಯಕರು.